## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಗಂಗಾವತಿ ತಾಲ್ಲೂಕಿನ ಮರಳಿ ಮತ್ತು ಡಂಗೇರಿ ಗ್ರಾಮಗಳಲ್ಲಿ ಬಯಲು ರಂಗ ಮಂದಿರ ಕಾಮಗಾರಿಗಳನ್ನು ಸರ್ಕಾರದ ಅನುದಾನದಲ್ಲಿ ನಿರ್ಮಿಸಲಾಗಿದೆ ಎಂದು ದಾಖಲೆಗಳನ್ನು ಸಲ್ಲಿಸಿ, ಹಣ ದುರುಪಯೋಗಪಡಿಸಿಕೊಂಡಿರುವ ಬಗ್ಗೆ ಆರೋಪ -ಸಂಬಂದಿಸಿದವರ ವಿರುದ್ಧ ಇಲಾಖಾ ವಿಚಾರಣೆಗೆ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ- ಆದೇಶ.

**ಓದಲಾಗಿದೆ:**

| | |
|---|---|
| 1. | ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ಇವರ ಅ.ಸ.ಪ.ಸಂಖ್ಯೆ:ಕಂಪ್ಲೇಟ್/ಉಪಲೋಕ್/ಜಿ.ಎಲ್.ಬಿ/4235/2015/2015/ಎಆರ್ಇ-3, ದಿನಾಂಕ:05.11.2016. |
| 2. | ಮಾನ್ಯ ಉಪ ಲೋಕಾಯುಕ್ತರವರ ಲೋಕಾಯುಕ್ತ ಕಾಯ್ದೆ ಕಲಂ 12(3) ರನ್ವಯ ವರದಿ ಸಂಖ್ಯೆ:ಕಂಪ್ಲೇಟ್/ಉಪಲೋಕ್/ಜಿ.ಎಲ್.ಬಿ/4235/ 2015/ ಎಆರ್ಇ-3, ದಿನಾಂಕ:28.10.2016 |

**ಪ್ರಸ್ತಾವನೆ:-**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ರವರು ಮೇಲೆ ಓದಲಾದ ಕ್ರಮ ಸಂಖ್ಯೆ(1) ರ ದಿನಾಂಕ:05.11.2016 ರ ಅರೆ ಸರ್ಕಾರಿ ಪತ್ರದ ಜೊತೆ ಮೇಲೆ ಕ್ರಮ ಸಂಖ್ಯೆ(2) ರಲ್ಲಿ ಓದಲಾದ ಮಾನ್ಯ ಉಪ ಲೋಕಾಯುಕ್ತರವರ ದಿನಾಂಕ:28.10.2016ರ ಲೋಕಾಯುಕ್ತ ಕಾಯ್ದೆಯ ಕಲಂ 12(3)ರ ವರದಿ ಹಾಗೂ ಇತರೆ ದಾಖಲೆಗಳನ್ನು ಲಗತ್ತಿಸಿ, ಸರ್ಕಾರಕ್ಕೆ ಕಳುಹಿಸಿ ಮಾನ್ಯ ಉಪ ಲೋಕಾಯುಕ್ತರವರ ವರದಿಯನುಸಾರ ಕೂಡಲೇ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪ ಲೋಕಾಯುಕ್ತರವರ ವರದಿ ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಿದ್ದು, ಶ್ರೀ ನಾಜೀರ್ ಖಾನ್ ತಂದೆ ಸಮದ ಖಾನ್, ಗಂಗಾವತಿ ತಾಲ್ಲೂಕು ಇವರು ಲೋಕಾಯುಕ್ತ ಕಛೇರಿಗೆ ದೂರೊಂದನ್ನು ಸಲ್ಲಿಸಿ, ಗಂಗಾವತಿ ತಾಲ್ಲೂಕಿನಲ್ಲಿ ಮರಳಿ ಮತ್ತು ಡಂಗೇರಿ ಗ್ರಾಮಗಳಲ್ಲಿ ಬಯಲು ರಂಗ ಮಂದಿರ ಕಾಮಗಾರಿಗಳನ್ನು ನಿರ್ವಹಿಸಲಾಗಿದೆ ಎಂದು ದಾಖಲೆಗಳನ್ನು ಸಲ್ಲಿಸಿ, ಶ್ರೀ ರವಿಪ್ರಸಾದ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ರಾಘವೇಂದ್ರ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಇವರು ಹಣ ದುರುಪಯೋಗಪಡಿಸಿಕೊಂಡಿರುತ್ತಾರೆ ಎಂದು ಆರೋಪಿಸಿರುತ್ತಾರೆ.

ಲೋಕಾಯುಕ್ತ ಕಛೇರಿಯು ಸದರಿ ದೂರಿನ ಕುರಿತು ತನಿಖೆ ಕೈಗೊಂಡಿದ್ದು, ಆರೋಪಿತರಾದ ಶ್ರೀ ರವಿಪ್ರಸಾದ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ರಾಘವೇಂದ್ರ ಕಿರಿಯ ಇಂಜಿನಿಯರ್ ಇವರಿಂದ ವಿವರಣೆ ಪಡೆದಿರುತ್ತದೆ. ಕಾಮಗಾರಿಗಳಿಗೆ ಸಂಬಂಧಿಸಿದ ಅಂದಾಜು ಪಟ್ಟಿಗಳನ್ನು ಪರಿಶೀಲಿಸಿದ್ದು, ಗ್ರಾಮಸ್ಥರು ಹಣವನ್ನು ಸಂಗ್ರಹಿಸಿ, ಮರಳಿ ಮತ್ತು ಡಂಗೇರಿ ಗ್ರಾಮಗಳಲ್ಲಿ ಬಯಲು ರಂಗ ಮಂದಿರಗಳನ್ನು ರೂಫ್ ಲೆವಲ್ ವರಗೆ ನಿರ್ಮಿಸಿದ್ದು ನಂತರ ಅನುದಾನ ಕೊರತೆಯಿಂದ ಕಾಮಗಾರಿಯನ್ನು ರೂಫ್ ಲೆವಲ್‌ವರಗೆ ಸ್ಥಗಿತಗೊಳಿಸಿರುವುದು, ಈ ರೀತಿ ಸ್ಥಗಿತಗೊಳಿಸಲ್ಪಟ್ಟ ಬಯಲು ರಂಗ ಮಂದಿರಗಳಿಗೆ ಅಪಾದಿತರು ಜಿಲ್ಲಾ ಪಂಚಾಯತ್ ಅನುದಾನದಲ್ಲಿ ತಲಾ ರೂ.2.50 ಲಕ್ಷಗಳಿಗೆ ಅಂದಾಜು ಪಟ್ಟಿ ತಯಾರಿಸಿ, ಕಾಮಗಾರಿಯನ್ನು ದಿನಾಂಕ:16.1.2014 ರಂದು ಪ್ರಾರಂಭಿಸಿ, ದಿನಾಂಕ:24.2.2014 ರಂದು ಪೂರ್ಣಗೊಳಿಸಿರುವ ರೀತಿ ಅಳತೆ ಪುಸ್ತಕದಲ್ಲಿ ಸುಳ್ಳು ದಾಖಲೆಗಳನ್ನು ಬರೆದು ಹಣ ಪಾವತಿಸಲಾಗಿದ್ದು ಆರೋಪಿತರು ಕಾಮಗಾರಿಗಳನ್ನು ಅರ್ಧ ಹಂತದಿಂದ ಪ್ರಾರಂಭಿಸಿ ಮುಕ್ತಾಯಗೊಳಿಸಿರುವ ಬಗ್ಗೆ ಯಾವುದೇ ದಾಖಲೆಗಳನ್ನು ಸಲ್ಲಿಸಿರುವುದಿಲ್ಲವೆಂದು, ಅಲ್ಲದೆ ಅಂದಾಜು ಪಟ್ಟಿಯಲ್ಲಿ ನಮೂದಿಸಿರುವಂತೆ ಬಯಲು ರಂಗ ಮಂದಿರಗಳನ್ನು ಪೂರ್ಣಗೊಳಿಸಲು ಜಿಲ್ಲಾ ಪಂಚಾಯತ್ ಸದಸ್ಯರು ಮತ್ತು ಗ್ರಾಮಸ್ಥರು ಶಿಫಾರಸ್ಸು ಮಾಡಿದ್ದಾರೆಂದು ತಿಳಿಸಿದ್ದು, ಈ ಬಗ್ಗೆ ಯಾವುದೇ ದಾಖಲೆಗಳನ್ನು ಆರೋಪಿತರು ಸಲ್ಲಿಸಿರುವುದಿಲ್ಲವೆಂದು ವರದಿಯಲ್ಲಿ ತಿಳಿಸಲಾಗಿದೆ.

---2

ತನಿಖಾವರದಿಯ ಬಗ್ಗೆ ಸಂಬಂದಿಸಿದ ಅಧಿಕಾರಿ/ನೌಕರರಿಂದ ವಿವರಣೆ ಪಡೆದುಕೊಂಡಿದ್ದು ಆಪಾದಿತರು ಸಲ್ಲಿಸಿರುವ ವಿವರಣೆಯಲ್ಲಿ ತಾವುಗಳು ಅಂದಾಜು ಪಟ್ಟಿಯ ಅನುಸಾರ ಕಾಮಗಾರಿ ಪೂರ್ಣಗೊಳಿಸಿ ಗುತ್ತಿಗೆದಾರರಿಗೆ ಹಣ ಪಾವತಿಸಿರುವುದರಿಂದ ತಮ್ಮ ಮೇಲಿನ ಆರೋಪವನ್ನು ನಿರಾಕರಿಸಿರುವರಾದರೂ ಬಯಲು ರಂಗಮಂದಿರಗಳ ಅರ್ಧ ನಿರ್ಮಾಣವಾಗಿರುವ ಬಗ್ಗೆ ಅಳತೆ ಪುಸ್ತಕದಲ್ಲಿ ಯಾವುದೇ ನಮೂದು ಮಾಡದಿರುವುದರಿಂದ ಜಿಲ್ಲಾ ಪಂಚಾಯತ್ ಸದಸ್ಯರು ಹಾಗೂ ಗ್ರಾಮಸ್ಥರ ಕಾಮಗಾರಿ ಪೂರ್ಣಗೊಳಿಸಿರುವಂತೆ ಶಿಫಾರಸ್ಸು ಮಾಡಿರುವ ಬಗ್ಗೆ ಯಾವುದೇ ದಾಖಲೆ ಸಲ್ಲಿಸಿಲ್ಲವಾದ ಕಾರಣ ಇವರ ಹೇಳಿಕೆಯನ್ನು ಪರಿಗಣಿಸಿರುವುದಿಲ್ಲವೆಂದು, ಗ್ರಾಮಸ್ಥರಿಂದ ಸಂಗ್ರಹಿಸಿದ ಹಣದಲ್ಲಿ ನಿರ್ಮಾಣವಾಗಿದ್ದ ಬಯಲು ರಂಗಮಂದಿರಗಳನ್ನು ತೋರಿಸಿ, ಆರೋಪಿತರು ಜಿಲ್ಲಾ ಪಂಚಾಯತ್ ಅನುದಾನದಲ್ಲಿ ಪೂರ್ಣಗೊಳಿಸಿದ ರೀತಿ ಅಂದಾಜು ಪಟ್ಟಿ ಇತರೆ ದಾಖಲೆಗಳನ್ನು ಸಲ್ಲಿಸಿ, ಹಣ ದುರುಪಯೋಗಪಡಿಸಿಕೊಂಡಿರುವುದು ಕಂಡು ಬರುತ್ತದೆಯೆಂದು, ಆರೋಪಿತರು ಸಲ್ಲಿಸಿರುವ ವಿವರಣೆಯು ಶಿಸ್ತು ನಡವಳಿಯನ್ನು ಕೈ ಬಿಡಲು ಸೂಕ್ತ ಹಾಗೂ ಸಮಾಧಾನಕರವಾಗಿರುವುದಿಲ್ಲವೆಂದು, ಆರೋಪಿತರು ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯದಲ್ಲಿ ಪೂರ್ಣ ಪ್ರಮಾಣದ ಕರ್ತವ್ಯ ನಿಷ್ಠೆ ಪ್ರಾಮಾಣಿಕತೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿ ವರ್ತಿಸಿ, ಸರ್ಕಾರದ ಹಣವನ್ನು ದುರುಪಯೋಗಪಡಿಸಿಕೊಂಡಿರುವುದು ಕಂಡು ಬರುತ್ತದೆಯೆಂದು ಈ ರೀತಿಯಾಗಿ ಆರೋಪಿತರು ಕ.ನಾ.ಸೇ (ನಡತೆ) ನಿಯಮಗಳ 1966 ರ ನಿಯಮ 3(1) ನ್ನು ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆಯೆಂದು ವರದಿಯಲ್ಲಿ ತಿಳಿಸಲಾಗಿದೆ.

ಪ್ರಸಕ್ತ ಪ್ರಕರಣದಲ್ಲಿ ಅಪಾದಿತರಾದ ಶ್ರೀ ರಾಘವೇಂದ್ರ ಇವರು ದಿನಾಂಕ:28.2.2015 ರಂದು ಸೇವೆಯಿಂದ ನಿವೃತ್ತಿ ಹೊಂದಿರುತ್ತಾರೆಂದು ಅವರ ವಿರುದ್ದ ಕ.ನಾ.ಸೇ ನಿಯಮ 214 (2) (ಬಿ) ರಡಿ ಮಂಜೂರಾತಿ ನೀಡಿ, ಸದರಿಯವರನ್ನು ಒಳಗೊಂಡಂತೆ ಶ್ರೀ ರವಿಪ್ರಸಾದ್ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರಿಬ್ಬರ ವಿರುದ್ದ ವಿವರವಾದ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪಲೋಕಾಯುಕ್ತರು ಸರ್ಕಾರವನ್ನು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿ ಮತ್ತು ಇತರೆ ದಾಖಲೆಗಳನ್ನು ಪರಿಶೀಲಿಸಿರುತ್ತದೆ. ಅಪಾದಿತರಾದ ಶ್ರೀ ರವಿಪ್ರಸಾದ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ರಾಘವೇಂದ್ರ ಕಿರಿಯ ಇಂಜಿನಿಯರ್ ಇವರು ಗಂಗಾವತಿ ತಾಲ್ಲೂಕು ಮರಳಿ ಮತ್ತು ಡಂಗೇರಿ ಗ್ರಾಮಗಳಲ್ಲಿ ಗ್ರಾಮಸ್ಥರುಗಳು ಕ್ರೋಢೀಕರಿಸಿದ ಹಣದಲ್ಲಿ ಅರ್ಧ ನಿರ್ಮಿಸಿದ ಬಯಲು ರಂಗ ಮಂದಿರಗಳನ್ನು ಜಿಲ್ಲಾ ಪಂಚಾಯತ್ ಅನುದಾನದಲ್ಲಿ ಹೊಸದಾಗಿ ಅನುಷ್ಠಾನಗೊಳಿಸಿ ಪೂರ್ಣಗೊಳಿಸಿದಂತೆ ದಾಖಲೆಗಳನ್ನು ಸೃಷ್ಟಿಸಿ ಹಣ ದುರುಪಯೋಗ ಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ. ಈರ್ವರು ಸರ್ಕಾರಿ ನೌಕರರಾಗಿದ್ದು ತಮ್ಮ ಕರ್ತವ್ಯದಲ್ಲಿ ಪೂರ್ಣ ಪ್ರಮಾಣದ ನಿಷ್ಠೆ ತೋರದೆ ದುರ್ನಡತೆ ಎಸಗಿ ಹಣ ದುರುಪಯೋಗಪಡಿಸಿಕೊಂಡಿರುವುದು ಕಂಡು ಬಂದಿರುವುದರಿಂದ ಇವರ ವಿರುದ್ದದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಮಾನ್ಯ ಉಪಲೋಕಾಯುಕ್ತರಿಂದ ನಡೆಸುವುದು ಅಗತ್ಯವೆಂದು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ, ಈ ಆದೇಶ.

**<u>ಆದೇಶ ಸಂಖ್ಯೆ:ಗ್ರಾಅಪ 142 ಇಎನ್‌ಕ್ಯೂ 16, ಬೆಂಗಳೂರು, ದಿನಾಂಕ:29.11.2016</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ರಾಘವೇಂದ್ರ, ಹಿಂದಿನ ಕಿರಿಯ ಇಂಜಿನಿಯರ್ (ಹಾಲಿ ನಿವೃತ್ತ), ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಗಂಗಾವತಿ ಇವರ ವಿರುದ್ದದ ಆರೋಪಗಳ ಬಗ್ಗೆ ವಿವರವಾದ ಇಲಾಖೆ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಗಳು (ವ.ನಿ.ಮೇ) ನಿಯಮಗಳು 1957 ರ ನಿಯಮ 11 ಮತ್ತು 11ಎ ರಂತೆ ನಡೆಸುವ ಸಲುವಾಗಿ ಕ.ನಾ.ಸೇ ನಿಯಮ 214 (2) (ಬಿ) ರಡಿ ಮಂಜೂರಾತಿಯನ್ನು ನೀಡಿದೆ.

---3

ಶ್ರೀ ರಾಘವೇಂದ್ರ, ಹಿಂದಿನ ಕಿರಿಯ ಇಂಜಿನಿಯರ್ (ಹಾಲಿ ನಿವೃತ್ತ), ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಗಂಗಾವತಿ. ಇವರನ್ನು ಒಳಗೊಂಡಂತೆ ಶ್ರೀ ರವಿಪ್ರಸಾದ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಗಂಗಾವತಿ. ಈ ಇಬ್ಬರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ವಿವರವಾದ ಇಲಾಖಾ ವಿಚಾರಣೆಯನ್ನು ಕ.ನಾ.ಸೇ (ವ.ನಿ.ಮೇ) ನಿಯಮಗಳು 1957 ರ ನಿಯಮ 11 ರ ಅನುಸಾರ ನಡೆಸಲು ಪ್ರಕರಣವನ್ನು ಸದರಿ ನಿಯಮಗಳ ನಿಯಮ 14-ಎ ರನ್ವಯ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿದ್ದೇಶ ಪೂಜಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು
6. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು-ಎ ಮತ್ತು ಸಿ).
7. ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ರವರ ಮುಖಾಂತರ)
8. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
9. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ /ಜಂಟಿ ಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
10. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.